ಸಂಜೆವಾಣಿ
1982 ರಿಂದ ನಿಮ್ಮ ಸೇವೆಯಲ್ಲಿ

**Sunday, September 25, 2011**

# ಜೈನ್ ವಿಶ್ವವಿದ್ಯಾಲಯದ ನೂತನ ಯೋಜನೆ

ಬೆಂಗಳೂರು, ಸೆ. ೨೪- ಏವಿಯೇಷನ್ ಮತ್ತು ಏರೋಸ್ಪೇಸ್ ಉದ್ದಿಮೆಯ ಬೆಳವಣಿಗೆ ಮತ್ತು ತಜ್ಞ ಮಾನವ ಸಂಪನ್ಮೂಲದ ಬೇಡಿಕೆಯನ್ನು ಪರಿಗಣಿಸಿ, ಜೈನ್ ವಿಶ್ವವಿದ್ಯಾಲಯವು ಹಿಂದೂಸ್ತಾನ್ ಏರೋಸ್ಪೇಸ್ ಲ್ಯಾಬೋರೇಟರೀಸ್ ಹಾಗೂ ನ್ಯಾಷನಲ್ ಇನ್ಸ್ಟಿಟ್ಯೂಟ್ ಆಫ್ ಏರೋಸ್ಪೇಸ್ ಇಂಜಿನಿಯರಿಂಗ್ ಅಂಡ್ ಮ್ಯಾನೇಜ್‌ಮೆಂಟ್ ಎಂಬ ನೂತನ ಯೋಜನೆಯನ್ನು (ಏಏಎಇಎಮ್) ಹೊರತರುತ್ತಿದೆ.

ಹಲವು ಪ್ರತಿನಿಧಿಗಳ ರಾಷ್ಟ್ರೀಯ ಸಲಹಾ ಸಮಿತಿಯ ಶಿಫಾರಸ್ಸಿನ ಮೇರೆಗೆ ಏಏಎಇಎಮ್ ಉತ್ಕೃಷ್ಟ ಗುಣಮಟ್ಟದ ಸಂಸ್ಥೆಯನ್ನು ಸ್ಥಾಪಿಸುವ ಉದ್ದೇಶವನ್ನು ಹೊಂದಿದ್ದು, ಆ ಮೂಲಕ ಜಾಗತಿಕ ಶಿಕ್ಷಣ, ತರಬೇತಿ ಮತ್ತು ಸಂಶೋಧನೆ ಹಾಗೂ ಏರೋಸ್ಪೇಸ್ ಇಂಜಿನಿಯರಿಂಗ್ ಅಂಡ್ ಮ್ಯಾನೇಜ್‌ಮೆಂಟ್ ಕ್ಷೇತ್ರದಲ್ಲಿನ ತಂತ್ರಜ್ಞಾನ ಮತ್ತು ವ್ಯವಹಾರದ ಬೆಳವಣಿಗೆಗೆ ಸಹಾಯ ಮಾಡುವ ಯೋಜನೆಯನ್ನು ಹಾಕಿಕೊಂಡಿದೆ.

ಆದ್ದರಿಂದ ಜೈನ್ ವಿಶ್ವವಿದ್ಯಾಲಯವು ಏಏಎಇಎಮ್ ಡಿಪ್ಲೊಮಾ, ಪದವಿಪೂರ್ವ, ಸ್ನಾತಕೋತ್ತರ, ಸಂಶೋಧನೆಯ ಜೊತೆಗೆ ಏರೋಸ್ಪೇಸ್ ಇಂಜಿನಿಯರಿಂಗ್‌ನಲ್ಲಿ ಪಿಎಚ್‌ಡಿ, ಡಿಪ್ಲೊಮಾ, ಪ್ರೋಗ್ರಾಮ್ ಹಾಗೂ ಎಮ್‌ಟೆಕ್, ಏರ್‌ಪೋರ್ಟ್ ಇನ್ಫ್ರಾಸ್ಟ್ರಕ್ಚರ್ ಡಿಸೈನ್ ಅಂಡ್ ಕಂಸ್ಟ್ರಕ್ಷನ್ ಮ್ಯಾನೇಜ್‌ಮೆಂಟ್‌ನಲ್ಲಿ ಎಮ್‌ಟೆಕ್ ಹಾಗೂ ಮತ್ತಿತರ ವಿಷಯಗಳನ್ನು ಪ್ರಸ್ತುತಪಡಿಸಲಾಗುವುದು ಎಂದು ಸಂಸ್ಥೆ ತಿಳಿಸಿದೆ.

ಏಏಇಎಮ್ ಅಧಿಕೃತವಾಗಿ ಇಂದು ಜೈನ್ ಗ್ಲೋಬಲ್ ಕ್ಯಾಂಪಸ್‌ನಲ್ಲಿ ಆರಂಭವಾಗಿದ್ದು, ವಿಜ್ಞಾನ ಮತ್ತು ತಂತ್ರಜ್ಞಾನ ವಿಭಾಗದ, ಯೋಜನಾ ಆಯೋಗದ ಸದಸ್ಯರಾದ ಡಾ.ಕೆ. ಕಸ್ತೂರಿ ರಂಗನ್ ಉದ್ಘಾಟನೆ ಮಾಡಿದರು.

ಪತ್ರಿಕಾಗೋಷ್ಠಿಯಲ್ಲಿ ಡಾ. ಸಿ.ಜಿ. ಕೃಷ್ಣದಾಸ್, (ಎಚ್‌ಎಎಲ್ ಅಧ್ಯಕ್ಷ), ವಿಧಾಯಕ ಸಮಿತಿ ಹಾಗೂ ಏರೋಸ್ಪೇಸ್ ಇಂಜಿನಿಯರಿಂಗ್ ಮುಖ್ಯಸ್ಥರು, ಪ್ರಾಧ್ಯಾಪಕರು ಮತ್ತಿತರರು ಪಾಲ್ಗೊಂಡಿದ್ದರು.